# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 530 |
| ಮಾನ್ಯ ಸದಸ್ಯರ ಹೆಸರು | ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 20-02-2023 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕುಟುಂಬ ಕಲ್ಯಾಣ ಕಾರ್ಯಕ್ರಮಗಳನ್ನು ಜನಸಾಮಾನ್ಯರಿಗೆ ತಲುಪಿಸುವ ಆರೋಗ್ಯ ನಿರೀಕ್ಷಣಾಧಿಕಾರಿ ಹುದ್ದೆಗಳ ಭರ್ತಿಗೆ ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಆ) | ಇಲಾಖೆಯಲ್ಲಿ 5944 ಆರೋಗ್ಯ ನಿರೀಕ್ಷಣಾಧಿಕಾರಿ ಹುದ್ದೆಗಳು ಮಂಜೂರಾಗಿರುವುದು ನಿಜವೇ; | ಹೌದು. |
| (ಇ) | ಆರೋಗ್ಯ ನಿರೀಕ್ಷಣಾಧಿಕಾರಿ ಹುದ್ದೆಗಳು ಖಾಲಿ ಇರುವುದರಿಂದ ಕ್ಷೇತ್ರಗಳ ಮಟ್ಟದಲ್ಲಿ ಆರೋಗ್ಯ ಸೇವೆಗಳನ್ನು ಜನಸಾಮಾನ್ಯರಿಗೆ ತಲುಪಿಸಲು ತೊಂದರೆಯಾಗುತ್ತಿದ್ದು ಈ ಕುರಿತು ಸರ್ಕಾರ ಹಾಗೂ ಇಲಾಖೆ ಏನು ಕ್ರಮಕೈಗೊಂಡಿದೆ; | ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಆರೋಗ್ಯ ನಿರೀಕ್ಷಣಾಧಿಕಾರಿಗಳಿಗೆ ಕ್ಷೇತ್ರ ಮಟ್ಟದಲ್ಲಿ ಖಾಲಿ ಇರುವ ಆರೋಗ್ಯ ನಿರೀಕ್ಷಣಾಧಿಕಾರಿ ಹುದ್ದೆಗಳ ಹೆಚ್ಚುವರಿ ಕಾರ್ಯ ಹಂಚಿಕೆ ಮಾಡಿ ಜನಸಾಮಾನ್ಯರಿಗೆ ಆರೋಗ್ಯ ಸೇವೆಯಲ್ಲಿ ಯಾವುದೇ ತೊಂದರೆಯಾಗದಂತೆ ಸಂಬಂಧಪಟ್ಟ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಕ್ರಮವಹಿಸುತ್ತಿದ್ದಾರೆ.<br><br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಆರೋಗ್ಯ ನಿರೀಕ್ಷಣಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು ಸ್ವೀಕೃತವಾಗಿರುವ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದ್ದು, ಪರಿಶೀಲನಾ ಹಂತದಲ್ಲಿದೆ. |
| (ಈ) | ನಿರೀಕ್ಷಣಾಧಿಕಾರಿ ಹುದ್ದೆಗಳ ನೇಮಕಾತಿಯ ಕಡತವು 4 ತಿಂಗಳುಗಳಿಂದ ಸರ್ಕಾರದಲ್ಲಿ ಬಾಕಿ ಉಳಿಯಲು ಕಾರಣಗಳೇನು? | |

ಸಂಖ್ಯೆ: ಆಕುಕ 64 ಹೆಚ್‌ಎಸ್‌ಎಂ 2023

(ಡಾ: ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು